# <u>ಅಭ್ಯರ್ಥಿಗಳಿಗೆ ಸೂಚನೆಗಳು</u>

ಆಯೋಗವು ದಿನಾಂಕ:04–06–2023ರಂದು ನಡೆಸಿದ ಮುಖ್ಯ ವಿದ್ಯುತ್ ಪರಿವೀಕ್ಷಣಾಲಯದಲ್ಲಿನ ಸಹಾಯಕ ವಿದ್ಯುತ್ ಪರಿವೀಕ್ಷಕರು (ಆರ್.ಪಿ.ಸಿ.) (ಗ್ರೂಪ್–ಬಿ) ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳ **ಸಾಮಾನ್ಯ ಪತ್ರಿಕೆ (ಪತ್ರಿಕೆ–1) (ವಿಷಯ ಸಂಕೇತ:529) ಮತ್ತು ನಿರ್ದಿಷ್ಟ ಪತ್ರಿಕೆ (ಪತ್ರಿಕೆ–2) (ವಿಷಯ ಸಂಕೇತ:530)**ಗಳ **ಕೀ–ಉತ್ತರಗಳನ್ನು** ಆಯೋಗದ ಅಂತರ್ಜಾಲ ತಾಣದಲ್ಲಿ ಪ್ರಕಟಿಸಲಾಗಿರುತ್ತದೆ.

ಅಭ್ಯರ್ಥಿಗಳು ಸದರಿ "ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ದಿನಾಂಕ:12–06–2023ರಂದು ಸಂಜೆ 5–30 ರೊಳಗಾಗಿ **<u>ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು–560001</u>** ಈ ವಿಳಾಸಕ್ಕೆ ಮಾತ್ರ ತಲುಪುವಂತೆ ಕಳುಹಿಸತಕ್ಕದ್ದು. **ಆಕ್ಷೇಪಣೆಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ: 12–06–2023ರ ಸಂಜೆ 5:30 ಆಗಿದ್ದು,** ಈ ಅವಧಿಯ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ." ಅಭ್ಯರ್ಥಿಗಳ ಆಕ್ಷೇಪಣೆಗಳು ಅಂಚೆಯ ಮೂಲಕ ಆಯೋಗಕ್ಕೆ ತಲುಪಲು ವಿಳಂಬವಾದಲ್ಲಿ ಕೆ.ಪಿ.ಎಸ್.ಸಿ.ಯು ಜವಾಬ್ದಾರಿಯಾಗಿರುವುದಿಲ್ಲ.

1) ಆಕ್ಷೇಪಣೆಗಳನ್ನು ಕಡ್ಡಾಯವಾಗಿ ಆಯೋಗದ ಅಂತರ್ಜಾಲ ತಾಣದಲ್ಲಿ ಪ್ರಕಟಿಸಿರುವ ನಮೂನೆಯಲ್ಲಿಯೇ (ಕನ್ನಡ ಅಥವಾ ಇಂಗ್ಲೀಷ್) ಸಲ್ಲಿಸಬೇಕು.

2) ಆಕ್ಷೇಪಣೆಗಳನ್ನು ಸಲ್ಲಿಸುವ ಪ್ರತಿ ಪ್ರಶ್ನೆಗೆ ರೂ.50/–ರಂತೆ ಶುಲ್ಕವನ್ನು (ಐ.ಪಿ.ಓ ಅಥವಾ ಡಿ.ಡಿ. ಮೂಲಕ) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು, ಇವರ ಹೆಸರಿಗೆ ಸಂದಾಯ ಮಾಡಬೇಕು.

3) ಶುಲ್ಕ ಸಂದಾಯ ಮಾಡದ ಆಕ್ಷೇಪಣಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4) ಪ್ರತಿ ಪ್ರಶ್ನೆಯ ಕೀ ಉತ್ತರಕ್ಕೆ ಸಲ್ಲಿಸುವ ಆಕ್ಷೇಪಣೆಗಳಿಗೆ ಪೂರಕವಾಗಿ ಸಲ್ಲಿಸುವ ದಾಖಲೆಗಳಿಗೆ ಸಂಬಂಧಿಸಿದಂತೆ ಲೇಖಕರ ಹೆಸರು, ಪ್ರಕಾಶನದ ಪ್ರತಿ ಇತ್ಯಾದಿ ವಿವರಗಳನ್ನು ಆಕ್ಷೇಪಣೆಗಳೊಂದಿಗೆ ನಿಗದಿತ ನಮೂನೆಯಲ್ಲಿ ನಮೂದಿಸತಕ್ಕದ್ದು.

5) ದಾಖಲೆಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸದ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು.

6) ದಾಖಲೆಗಳ ಪ್ರತಿ ಪುಟದ ಮೇಲೆ ಪ್ರಶ್ನೆ ಸಂಖ್ಯೆ ಮತ್ತು ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಬರೆಯತಕ್ಕದ್ದು.

7) ಆಕ್ಷೇಪಣೆಯೊಂದಿಗೆ ಅಭ್ಯರ್ಥಿಯು ದೃಢೀಕರಿಸಿದ ಪ್ರವೇಶ ಪತ್ರದ ಪ್ರತಿಯನ್ನು ಪರಿಶೀಲನೆಗಾಗಿ ಲಗತ್ತಿಸಬೇಕು.

ಸಹಿ/–
ಪರೀಕ್ಷಾ ನಿಯಂತ್ರಕರು,
ಕರ್ನಾಟಕ ಲೋಕಸೇವಾ ಆಯೋಗ,
ಬೆಂಗಳೂರು.